## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಾವಣಗೆರೆ ವ್ಯಾಪ್ತಿಯ ವಿಪತ್ತು ಸ್ಪಂದನಾ ಪಡೆಗೆ ರಕ್ಷಣಾ ಉಪಕರಣಗಳನ್ನು ಖರೀದಿಸಲು ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: HD/96/SFB/2022, ದಿನಾಂಕ:02.06.2022.
2. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆ ಇವರ ಪತ್ರ ಸಂಖ್ಯೆ:03/02/2022-23, ದಿನಾಂಕ:22-11-2022.
3. ಸರ್ಕಾರದ ಆದೇಶ ಸಂಖ್ಯೆ: ಕಂಇ 217 ಟಿಎನ್‌ಆರ್ 2022, ದಿನಾಂಕ: 14.02.2023.
4. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆ ಇವರ ಪತ್ರ ಸಂಖ್ಯೆ: 03/ಎಸ್‌ಡಿಆರ್ ಎಫ್/2022-23, ದಿನಾಂಕ: 22.05.2024.

*****

**ಪ್ರಸ್ತಾವನೆ:**

2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 383 ರಲ್ಲಿ ಪ್ರಕೃತಿ ವಿಕೋಪ ಸಂದರ್ಭದಲ್ಲಿ ತುರ್ತು ಸ್ಪಂದನೆಗಾಗಿ ದಾವಣಗೆರೆಯಲ್ಲಿ ಒಂದು SDRF ಕಂಪನಿಯನ್ನು ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವಂತೆ, ದಾವಣಗೆರೆಯಲ್ಲಿ ಒಂದು SDRF ಕಂಪನಿಯನ್ನು ಸ್ಥಾಪಿಸುವುದಕ್ಕೆ 127 ಹುದ್ದೆಗಳನ್ನು ಸೃಜಿಸಿ ನಿಯೋಜನೆ ಮೇಲೆ ಭರ್ತಿ ಮಾಡಿಕೊಳ್ಳಲು ಮೇಲೆ ಓದಲಾದ (1) ರ ಆದೇಶದಲ್ಲಿ ಮಂಜೂರಾತಿ ನೀಡಲಾಗಿರುತ್ತದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿ:12.09.2022 ರಂದು ವಿಪತ್ತು ನಿರ್ವಹಣೆಗೆ ಸಂಬಂಧಿಸಿದಂತೆ ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ದಾವಣಗೆರೆ ಜಿಲ್ಲೆಯಲ್ಲಿ SDRF 'F' ಕಂಪನಿಗೆ ಅಗತ್ಯವಿರುವ ರಕ್ಷಣಾ ಉಪಕರಣಗಳನ್ನು ಖರೀದಿಸಲು ರೂ. 5.00 ಕೋಟಿಗಳ ಅನುದಾನವನ್ನು SDRF ಸಾಮರ್ಥ್ಯಾಭಿವೃದ್ಧಿ ನಿಧಿಯಡಿ ಬಿಡುಗಡೆಗೊಳಿಸಲು ತೀರ್ಮಾನಿಸಿದ್ದರ ಮೇರೆಗೆ, ಸದರಿ ರಾಜ್ಯ ವಿಪತ್ತು ಸ್ಪಂದನಾ ಪಡೆ ಕಾರ್ಯನಿರ್ವಹಿಸಲು ಅಗತ್ಯವಿರುವ ರಕ್ಷಣಾ ಉಪಕರಣಗಳನ್ನು ಖರೀದಿಸಲು ರೂ. 500.00 ಲಕ್ಷ (ಐದುನೂರು ಲಕ್ಷ) ಅನುದಾನವನ್ನು ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ (2) ರ ಪತ್ರದಲ್ಲಿ ಪೊಲೀಸ್ ಮಹಾನಿರ್ದೇಶಕರು, ಕೋರಿರುವುದನ್ನು ಪರಿಶೀಲಿಸಿ, ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿ ಒಂದು ವಿಪತ್ತು ಸ್ಪಂದನಾ ಪಡೆ ಕಂಪನಿಗೆ ಅಗತ್ಯವಿರುವ ರಕ್ಷಣಾ ಉಪಕರಣಗಳನ್ನು ಖರೀದಿಸಲು ರಾಜ್ಯ ವಿಪತ್ತು ಪರಿಹಾರ ನಿಧಿ ಲೆಕ್ಕ ಶೀರ್ಷಿಕೆ: "2245-80-102-0-01-051 (ಸಾಮಾನ್ಯ ವೆಚ್ಚಗಳು)"ರಡಿ ರೂ. 500.00 ಲಕ್ಷ (ಐದುನೂರು ಲಕ್ಷ) ಗಳನ್ನು ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆಯ ನಿರ್ದೇಶನಾಲಯ ಇವರಿಗೆ ಮೇಲೆ ಓದಲಾದ (3) ರ ಸರ್ಕಾರಿ ಆದೇಶದಲ್ಲಿ ಬಿಡುಗಡೆಗೊಳಿಸಲಾಗಿರುತ್ತದೆ. ಆದರೆ, ಸದರಿ ಮೊತ್ತವನ್ನು ಬಳಕೆ ಮಾಡಿಕೊಳ್ಳಲು ಸಾಧ್ಯವಾಗದೆ ವ್ಯಪಗತವಾಗಿ ದಿನಾಂಕ: 31.03.2023 ಕ್ಕೆ ಸರ್ಕಾರಕ್ಕೆ ಜಮೆಯಾಗಿರುವುದಾಗಿ ತಿಳಿಸುತ್ತಾ, ಸದರಿ ರೂ. 500.00 ಲಕ್ಷ (ಐದುನೂರು ಲಕ್ಷ ರೂಪಾಯಿಗಳು) ಅನುದಾನವನ್ನು ಮರುಬಿಡುಗಡೆ ಮಾಡಿ ಪ್ರಸ್ತುತ ಆರ್ಥಿಕ ವರ್ಷ 2024-25 ನೇ ಸಾಲಿಗೆ ಬಳಸಿಕೊಳ್ಳಲು ಅನುಮತಿ ನೀಡುವಂತೆ, ಮೇಲೆ ಓದಲಾದ ಕ್ರ.ಸಂ.(4) ರ ಪತ್ರದಲ್ಲಿ, ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆ ಇವರು ಕೋರಿರುತ್ತಾರೆ.

.....2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ದಾವಣಗೆರೆಯಲ್ಲಿ ಒಂದು SDRF ಕಂಪನಿಯನ್ನು ಸ್ಥಾಪಿಸಲು ಅಗತ್ಯವಿರುವ ರಕ್ಷಣಾ ಉಪಕರಣಗಳನ್ನು ಖರೀದಿಸಲು ರೂ 500.00 ಲಕ್ಷ (ಐದುನೂರು ಲಕ್ಷಗಳು) ಗಳನ್ನು ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆ ಇವರಿಗೆ ಮರುಬಿಡುಗಡೆಗೊಳಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕಂಇ 182 ಟಿಎನ್‌ಆರ್ 2023;**
**ಬೆಂಗಳೂರು, ದಿನಾಂಕ: 09.10.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿ ಒಂದು ವಿಪತ್ತು ಸ್ಪಂದನಾ ಪಡೆ (ಎಫ್ ಕಂಪನಿಗೆ) ಅಗತ್ಯವಿರುವ ರಕ್ಷಣಾ ಉಪಕರಣಗಳನ್ನು ಖರೀದಿಸಲು 2024-25ನೇ ಸಾಲಿನಲ್ಲಿ ರಾಜ್ಯ ವಿಪತ್ತು ಪರಿಹಾರ ನಿಧಿ SDRF – Preparedness and Capacity Building ಲೆಕ್ಕ ಶೀರ್ಷಿಕೆ: "2245-80-102-0-01-051 (ಸಾಮಾನ್ಯ ವೆಚ್ಚಗಳು)"ರಡಿ ರೂ.500.00 ಲಕ್ಷ (ಐದುನೂರು ಲಕ್ಷ) ಗಳನ್ನು ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾ ನಿರ್ದೇಶಕರು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆಯ ನಿರ್ದೇಶನಾಲಯ ಇವರಿಗೆ ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:**

1. ಸದರಿ ರಾಜ್ಯ ವಿಪತ್ತು ಸ್ಪಂದನಾ ಪಡೆಗೆ ನಿಯಮಗಳಂತೆ ಉಪಕರಣಗಳನ್ನು NDRF ಉಪಕರಣ ಪಟ್ಟಿಯಲ್ಲಿರುವ ರಕ್ಷಣ ಉಪಕರಣಗಳನ್ನು ಮಾತ್ರ ಪಾರದರ್ಶಕವಾಗಿ ಮಾರ್ಗಸೂಚಿಗಳ ಪ್ರಕಾರ ಗುರುತಿಸಿರುವ ಉತ್ತಮ ಗುಣಮಟ್ಟದ ಪರಿಕರಣಗಳನ್ನು ಖರೀದಿಸುವುದು.

2. ಕೇಂದ್ರೀಯ ಗೃಹ ಮಂತ್ರಾಲಯವು ದಿ:22-4-2022 ರಂದು ಹೊರಡಿಸಿರುವ Guidelines on Preparedness and Capacity Building ಮಾರ್ಗಸೂಚಿಯ ಕ್ರಮ ಸಂಖ್ಯೆ:12(111)ರನ್ವಯ Capacity Building ರಡಿ ವಾಹನಗಳನ್ನು ಖರೀದಿಸಲು ಅವಕಾಶವಿಲ್ಲದಿರುವ ಅಂಶವನ್ನು ಗಮನದಲ್ಲಿಟ್ಟುಕೊಂಡು ರಕ್ಷಣಾ ಉಪಕರಣಗಳನ್ನು ಖರೀಸುವುದು.

3. ಖರೀದಿ ಪ್ರಕ್ರಿಯೆಯಲ್ಲಿ ಲೋಪವಾದಲ್ಲಿ ಅಥವಾ SDRF ಅನುದಾನ ದುರುಪಯೋಗವಾದಲ್ಲಿ ಮಹಾ ನಿರ್ದೇಶಕರು,ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ರವರನ್ನು ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುವುದು.

4. ಪಾರದರ್ಶಕ ಟೆಂಡರ್ ಮುಖಾಂತರ ಕರ್ನಾಟಕ ಸಾರ್ವಜನಿಕ ಖರೀದಿಯಲ್ಲಿ ಪಾರದರರ್ಶಕತೆ ಅಧಿನಿಯಮ 1999ರ ವಿಧಾನ ಮತ್ತು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿ ಖರೀದಿಸತಕ್ಕದ್ದು.

5. ಉಪಕರಣಗಳ ಖರೀದಿಯನ್ನು ಉನ್ನತ ಮಟ್ಟದ ಸಮಿತಿಯ ಅನುಮೋದನೆ ಪಡೆದು ಉತ್ತಮ ಗುಣಮಟ್ಟದ ಉಪಕರಣಗಳನ್ನು ಖರೀದಿಸಿ ಕಾರ್ಯನಿರ್ವಹಣೆಯು ಉತ್ತಮವಾಗಿರುವ ಬಗ್ಗೆ ದೃಢಪಡಿಸಿಕೊಳ್ಳುವುದು.

6. ಸದರಿ ಅನುದಾನದ ಆರ್ಥಿಕ ಹಾಗು ಭೌತಿಕ ಪ್ರಗತಿಯ ವಿವರಗಳನ್ನು ಕಡ್ಡಾಯವಾಗಿ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾ ನಿರ್ದೇಶಕರು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗು ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಇಲಾಖೆ ಅವರ ಅಧಿಕೃತ ಜಾಲತಾಣದಲ್ಲಿ ಸಹ ಸಾರ್ವಜನಿಕರ ಮಾಹಿತಿಗೆ ಪ್ರಚುರಪಡಿಸುವುದು.

6. ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಯಾವ ಉದ್ದೇಶಕ್ಕೆ ಒದಗಿಸಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸತಕ್ಕದ್ದು ಹಾಗೂ ಅನುದಾನ ವೆಚ್ಚ ಮಾಡಿದ್ದಕ್ಕೆ ಸಂಬಂಧಿಸಿದಂತೆ ನಿಯಮಗಳಂತೆ ಲೆಕ್ಕ ಪತ್ರಗಳನ್ನು ಇಡತಕ್ಕದ್ದು ಮತ್ತು ಹಣಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಮೇಲಿನಂತೆ ಬಿಡುಗಡೆ ಮಾಡಿರುವ ಅನುದಾನವನ್ನು ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಹಾಗೂ ಸೇವೆಗಳು-3) ಇವರು ರಾಜ್ಯ ವಿಪತ್ತು ಪರಿಹಾರ ನಿಧಿ ಲೆಕ್ಕ ಶೀರ್ಷಿಕ:2245-80-102-0-01-051 (ಸಾಮಾನ್ಯ ವೆಚ್ಚಗಳು)ರಡಿ ಡ್ರಾ ಮಾಡಿ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆ ಇಲಾಖೆ, ಬೆಂಗಳೂರು ಇವರ DDO/CCO ಡ್ರಾಯಿಂಗ್ ಕೋಡ್‌ಗೆ ಜಮಾ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 634 ವೆಚ್ಚ-7/2023, ದಿನಾಂಕ: 24.09.2024 ರಲ್ಲಿ ನೀಡಿರುವ ಸಹಮತಿಯನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

H-G 01/10/2024

**(ಮುಕ್ತಾರ್ ಪಾಷ. ಹೆಚ್. ಜಿ.)**
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (A & E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ, ಪಿ.ಬಿ.ನಂ. 5398 ನ್ಯೂ ಬಿಲ್ಡಿಂಗ್ 'ಆಡಿಟ್ ಭವನ', ಬೆಂಗಳೂರು.
3. ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆ ಇಲಾಖೆ, ಅಣ್ಣಸ್ವಾಮಿ ಮೊದಲಿಯರ್ ರಸ್ತೆ, ಬೆಂಗಳೂರು-560042.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
5. ಜಂಟಿ ನಿರ್ದೇಶಕರು, ಖಜಾನೆ, ಆಯುಕ್ತಾಲಯ, KPCL, ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7 & 8,) ವಿಧಾನ ಸೌಧ, ಬೆಂಗಳೂರು.
7. ಉಪ ನಿರ್ದೇಶಕರು, (ತರಬೇತಿ & ಎಸ್‌ಡಿಆರ್‌ಎಫ್) ರಾಜ್ಯ ವಿಪತ್ತು ಸ್ಪಂದನಾ ಪಡೆ, ಬೆಂಗಳೂರು.

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಗೃಹ ಇಲಾಖೆ, ವಿಧಾನ ಸೌಧ ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರ ಆಪ್ತ ಸಹಾಯಕರು, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ). ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
6. ಕಂದಾಯ ಇಲಾಖೆ (ವಿ.ನಿ) ಲೆಕ್ಕ ಪತ್ರ ಶಾಖೆ.
7. ಶಾಖಾ ಕಡತ / ಹೆಚ್ಚುವರಿ ಪ್ರತಿಗಳು.